ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 487 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:04-12-2017

# ಸುತ್ತೋಲೆ

ವಿಷಯ: ಪ್ರತಿ ಗ್ರಾಮದಲ್ಲಿ ಆಟದ ಮೈದಾನವನ್ನು ನಿರ್ಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆಯ ಸಂಖ್ಯೆ:ಗ್ರಾಅಪ 793 ಗ್ರಾಪಂಅ 2015 ದಿನಾಂಕ:05-02-2016.

*********

ಆಟದ ಮೈದಾನಗಳು ಉತ್ತಮ ಅಭಿರುಚಿಯ ದ್ಯೋತಕವಾಗಿದ್ದು, ಕೆಲವೊಂದು ಗ್ರಾಮ ಪಂಚಾಯ್ತಿಗಳಲ್ಲಿ ಆಟವಾಡುವುದಕ್ಕಾಗಿ ಪ್ರತ್ಯೇಕ ಮೈದಾನಗಳಿರುವುದಿಲ್ಲವೆಂದು ದಿನಾಂಕ:31.08.2017ರ ವಿಜಯ ಕರ್ನಾಟಕ ದಿನ ಪತ್ರಿಕೆಯ ವಾಚಕರ ವಾಣಿಯಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಉಲ್ಲೇಖಿತ ಸುತ್ತೋಲೆಯಲ್ಲಿ ಗ್ರಾಮ ಪಂಚಾಯ್ತಿ ನಿಧಿಯಲ್ಲಿ ಶೇ 2 ಕ್ಕಿಂತ ಕಡಿಮೆಯಿರದಷ್ಟು ಮೊತ್ತವನ್ನು ಕ್ರೀಡಾ ಕಾರ್ಯಕ್ರಮಗಳಿಗಾಗಿ ಬಳಸಲು ಮಾರ್ಗಸೂಚಿಗಳನ್ನು ನೀಡಲಾಗಿದೆ.

ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯಲ್ಲಿ ವಾಸಿಸುವ ಮಕ್ಕಳ ಮಾನಸಿಕ ವಿಕಾಸ ಹಾಗೂ ದೇಹದಾರ್ಢ್ಯತೆಯು ಮಕ್ಕಳ ಬೆಳವಣಿಗೆಯ ಅವಿಭಾಜ್ಯ ಅಂಗವಾಗಿದೆ. ಅಲ್ಲದೆ ಟೆಲಿವಿಷನ್, ಮೊಬೈಲ್ ದೂರವಾಣಿ, ವಿಡಿಯೋ ಗೇಮ್ಸ್ ಮತ್ತು ಸೈಬರ್ ತಂತ್ರಜ್ಞಾನ ಇತ್ಯಾದಿಗಳಿಂದ ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಕುಂಠಿತಗೊಳ್ಳುತ್ತಿದೆ. ಆದ್ದರಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅನುದಾನ ಮತ್ತು ಕ್ರೀಡಾ ಚಟುವಟಿಕೆಗಳಿಗೆ ಮೀಸಲಿರಿಸಿರುವ ಅನುದಾನವನ್ನು ಬಳಸಿಕೊಂಡು ಪ್ರತಿ ಗ್ರಾಮದಲ್ಲಿ ಆಟದ ಮೈದಾನ ನಿರ್ಮಿಸಲು ಅಥವಾ ಹಾಲಿ ಇರುವ ಆಟದ ಮೈದಾನವನ್ನು ಅಭಿವೃದ್ಧಿಪಡಿಸಲು ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳು ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದೆ.

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯ್ತಿಗಳ ಕಾರ್ಯನಿರ್ವಹಾಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯ್ತಿಯ ಕಾರ್ಯನಿರ್ವಹಾಧಿಕಾರಿಯ ಮುಖಾಂತರ)

4) ಸಾಕಡತ